ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 1997

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಮಂತ್ರಿಗಳು) : ಸನ್ಮಾನ್ಯ ಅಧ್ಯಕ್ಷರೆ, 1997ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು

ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕ, 1997

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) : ಸನ್ಮಾನ್ಯ ಅಧ್ಯಕ್ಷರೆ, 1997ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ಎರಡನೆಯ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಕರ್ನಾಟಕ ಸೌಹಾರ್ದ ಸಹಕಾರಿ ವಿಧೇಯಕ, 1977

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) : ಸನ್ಮಾನ್ಯ ಅಧ್ಯಕ್ಷರೆ, 1997ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಶ್ರೀ ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ಇದೂ ಕೂಡ ಸಮಾಜದಲ್ಲಿ ಬಹಳಷ್ಟು ಪರಿಣಾಮವಾಗತಕ್ಕ ಮತ್ತು ಪರಿವರ್ತನೆ ತರತಕ್ಕ ಕಾನೂನು ಇದ್ದ ಕಾರಣ ನನ್ನ ಮನವಿ ಏನೆಂದರೆ ಇದನ್ನು ಜಂಟಿ ಸಲಹಾ ಸಮಿತಿಗೆ ರೆಫರ್ ಮಾಡಿದರೆ ಒಳ್ಳೆಯದು; ಇದು ಅಲ್ಲಿ ಚರ್ಚೆಯಾಗಿ ನಂತರ ಇಲ್ಲಿ ಬಂದು ಪಾಸ್ ಆದರೆ ಉತ್ತಮವೆಂದು ನನ್ನ ವೈಯಕ್ತಿಕ ಅಭಿಪ್ರಾಯ, ಇಲ್ಲ, ಇಲ್ಲೇ ಚರ್ಚೆ ಮಾಡಿ ಪಾಸ್ ಮಾಡುತ್ತೇವೆಂದರೆ ಅದು ನಿಮಗೆ ಬಿಟ್ಟಿದ್ದು. ಬೇಕಾದರೆ ಅದರ ಬಗ್ಗೆ ನಾಳೆ ಪ್ರಸ್ತಾಪ ಮಾಡೋಣ.

ಶ್ರೀ ಆರಗ ಜ್ಞಾನೇಂದ್ರ : ಇದರ ಬಗ್ಗೆ ಸ್ವಲ್ಪ ಚರ್ಚೆ ಮಾಡಬೇಕಾಗಿರುವುದರಿಂದ ದಯಮಾಡಿ ನಾಳೆ ಚರ್ಚೆಗೆ ಅವಕಾಶ ಮಾಡಿಕೊಡಿ.

ಅಧ್ಯಕ್ಷರು : ಸಹಕಾರ ಇಲಾಖೆಯ ಮಂತ್ರಿಗಳು ಮಂಡಿಸಿರತಕ್ಕ ವಿಧೇಯಕವನ್ನು ನಾಳೆ ಚರ್ಚೆಗೆ ತೆಗೆದುಕೊಳ್ಳೋಣ. ಈಗ ಕೃಷಿ ಮಾರುಕಟ್ಟೆ ರಾಜ್ಯ ಮಂತ್ರಿಗಳದ್ದು ಒಂದು ವಿಧೇಯಕ